**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 280/2024**

**ಚಾ.ಸಾ- 1**
**ಪ್ರಾ.ಸಾ - 1**

**ಸಾಕ್ಷಿಗೆ ದಿನಾಂಕ 19-06-2026ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಶಿವಕುಮಾರ |
| ತಂದೆಯ ಹೆಸರು | ಃ | ಮಲ್ಲಪ್ಪ |
| ವಯಸ್ಸು | ಃ | 38 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಕೋನಾ ಹಿಪ್ಪರಗಾ |

**ಮುಖ್ಯವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1ನೇ ಆರೋಪಿ ನನ್ನ ಚಿಕ್ಕಪ್ಪನ ಮಗ, 2ನೇ ಆರೋಪಿ ಚಿಕ್ಕಪ್ಪನ ಸೊಸೆ, 3 ರಿಂದ 6ನೇ ಆರೋಪಿತರು ನಮ್ಮ ಸಂಬಂಧಿಕರಾಗಬೇಕು. ಚಾಸಾ-4 ನನ್ನ ತಮ್ಮ, ಚಾಸಾ-5 ನನ್ನ ತಂದೆ , ಚಾಸಾ-6 ನನ್ನ ತಾಯಿಯಾಗಬೇಕು. ಚಾಸಾ-7 ಮತ್ತು 8 ಗೊತ್ತು.

ನನ್ನ ಮತ್ತು ಆರೋಪಿತರ ಮಧ್ಯೆ ಸಣ್ಣ ಪುಟ್ಟ ಬಾಯಿ ಮಾತಿನ ಜಗಳ ಆಗಿರುತ್ತದೆ.

ಆರೋಪಿತರು ಅವಾಚ್ಯ ಶಬ್ದಗಳಿಂದ ಬೈದಿಲ್ಲ ಅತಿಕ್ರಮ ಪ್ರವೇಶ ಮಾಡಿ ಬೆಳೆಗಳನ್ನು ಹಾಳು ಮಾಡಿಲ್ಲ ಜೀವದ ಬೆದರಿಕೆ ಹಾಕಿಲ್ಲ.

ಸಾಕ್ಷಿಗೆ ದೂರನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದೂರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ರ ದಾಖಲೆಗೆ 2 ವರ್ಷಗಳ ಹಿಂದೆ ನಾನು ಪೊಲೀಸ್ ಠಾಣೆಗೆ ಹೋದಾಗ ನಿಪಿ-1 ರ ಮೇಲೆ ನನ್ನ ಸಹಿ ಪಡೆದಿರುತ್ತಾರೆ. ನಿಪಿ-1 ದೂರಿನಲ್ಲಿ ಬರೆದಂತಹ ವಿಚಾರಗಳು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಗುನ್ನ ಸ್ಥಳದ ಪಂಚನಾಮೆ ಮಾಡಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು

ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ**

ಕೋನಾಹಿಪ್ಪರಗಾದಲ್ಲಿರುವ ಹೊಲದ ಸ.ನಂ.41/5 ರಲ್ಲಿ 2 ಎಕರೆ 10 ಗುಂಟೆ ಜಮೀನಿನ ವಿಚಾರವಾಗಿ ಆರೋಪಿತರು ಮೊದಲಿನಿಂದಲೂ ತಕರಾರು ಮಾಡುತ್ತಾ ಬಂದಿದ್ದಾರೆ ಎಂದರೆ ಸರಿಯಲ್ಲ. ಅದೇ ವಿಷಯವಾಗಿ ದಿನಾಂಕ 02-11-2023ರ ರಾತ್ರಿ 10 ಗಂಟೆಗೆ ಆರೋಪಿತರು ಹೊಲದಲ್ಲಿ ಅತಿಕ್ರಮ ಪ್ರವೇಶ ಮಾಡಿ ಹೊಲದಲ್ಲಿರುವ ಬೆಳೆದಿರುವ ಹತ್ತಿ ಬೆಳೆಯನ್ನು ಟ್ರ್ಯಾಕ್ಟರ್ ರೋಟರನಿಂದ ನಾಶಪಡಿಸಿರುತ್ತಾರೆ ಎಂದರೆ ಸರಿಯಲ್ಲ. ವಿಷಯ ಗೊತ್ತಾಗಿ ದಿನಾಂಕ 03-11-2023 ರಂದು ಬೆಳಿಗ್ಗೆ 6 ಗಂಟೆಗೆ ಆರೋಪಿತರಿಗೆ ಕೇಳಲು ಹೋದಾಗ 1ನೇ ಆರೋಪಿಯು ಅವಾಚ್ಯ ಶಬ್ದಗಳಿಂದ ಬೈದು ಜೀವದ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. 4 ರಿಂದ 6ನೇ ಆರೋಪಿತರು 1 ರಿಂದ 3ನೇ ಆರೋಪಿತರಿಗೆ ಜಗಳಕ್ಕೆ ಕುಮ್ಮಕ್ಕು ನೀಡಿರುತ್ತಾರೆ ಎಂದರೆ ಸರಿಯಲ್ಲ.

ನಿಮ್ಮ ಹೊಲದಲ್ಲಿ 4 ತಿಂಗಳ ಬೆಳೆ ಇದ್ದು ಅವರು ನಾಶಪಡಿಸಿದ್ದರಿಂದ 60 ಸಾವಿರ ರೂಪಾಯಿ ನಷ್ಟ ಆಗಿರುತ್ತದೆ ಎಂದರೆ ಸರಿಯಲ್ಲ. ಆರೋಪಿತರು ನಿಮಗೆ ಜೀವದ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಗಲಾಟೆಯ ವಿಚಾರವಾಗಿ ನಿಪಿ-1 ರಂತೆ ದೂರು ನೀಡಿರುತ್ತೀರಿ ಎಂದರೆ ಸರಿಯಲ್ಲ.

ದಿನಾಂಕ 14-11-2023 ರಂದು ಬೆಳಿಗ್ಗೆ 9 ರಿಂದ 10 ಗಂಟೆ ಸಮಯದಲ್ಲಿ ನೀವು ತೋರಿಸಿದ ಜಾಗದಲ್ಲಿ ಪೊಲೀಸರು ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ನೀವು ಮತ್ತು ಆರೋಪಿತರು ರಾಜೀ ಆಗಿದ್ದೀರಿ ಎಂದರೆ ಸರಿ. ನೀವು ಮತ್ತು ಆರೋಪಿತರು ರಾಜೀ ಆಗಿದ್ದರಿಂದ ಆರೋಪಿತರು ನಿಮಗೆ ಅವಾಚ್ಯ ಶಬ್ದಗಳಿಂದ ಬೈದು ಬೆಳೆ ನಾಶ ಮಾಡಿ ಜೀವದ ಬೆದರಿಕೆ ಹಾಕಿದ್ದರೂ ಸಹ ಮಾಡಿಲ್ಲ ಎಂದು ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟಿ ಸವಾಲುಃ ಆರೋಪಿತರ ಪರ ವಕೀಲರಿಂದಃ ಇರುವುದಿಲ್ಲ.**

ಮರುವಿಚಾರಣೆ: ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತುಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಜೇವರಗಿ